**ಪ್ರಧಾನ ದಿವಾನಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .**

**ಸಿ.ಸಿ.ನಂ. 836/2023**

| | | |
|---|---|---|
| ಸಾಕ್ಷಿದಾರರ ಹೆಸರು | : | ಕೃಷ್ಣಯ್ಯ |
| ತಂದೆಯ ಹೆಸರು | : | ರಂಗಯ್ಯ |
| ವಯಸ್ಸು | : | 75 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಹುರಾ ಗ್ರಾಮ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 09.12.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಚಾಸಾ–2 ನನ್ನ ಅಳಿಯ. ಮೃತ ಕೆಂಪಮ್ಮ ನನ್ನ ಹೆಂಡತಿ. ಅಪಘಾತದಲ್ಲಿ ನನ್ನ ಹೆಂಡತಿ ಮೃತಪಟ್ಟಿದ್ದು, ಅಪಘಾತ ಯಾರ ತಪ್ಪಿನಿಂದ ಮತ್ತು ಹೇಗೆ ಸಂಭವಿಸಿರುತ್ತದೆ ಎಂದು ನಾನು ನೋಡಿಲ್ಲ. ಈ ಬಗ್ಗೆ ಪೊಲೀಸರು ನಾಲ್ಕು ದಾಖಲೆಗಳಿಗೆ ನನ್ನ ಸಹಿ ಪಡೆದಿರುತ್ತಾರೆ. ಸದರಿ ದಾಖಲೆಗಳು ದೂರು ಮತ್ತು ಮಹಜರ್ ಗಳಾಗಿದ್ದು, ಸಾಕ್ಷಿಯು ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ ಎರಡು ದೂರುಗಳನ್ನು ಕ್ರಮವಾಗಿ **ನಿ.ಪಿ–1** ಮತ್ತು **2** ಎಂದು, ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ಕ್ರಮವಾಗಿ **ನಿ.ಪಿ–1(ಎ)** ಮತ್ತು **(ಬಿ)** ಎಂದು, ಎರಡು ಮಹಜರ್ ಗಳನ್ನು ಕ್ರಮವಾಗಿ **ನಿ.ಪಿ–3** ಮತ್ತು **4** ಎಂದು ಮತ್ತು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ಕ್ರಮವಾಗಿ **ನಿ.ಪಿ–3(ಎ)** ಮತ್ತು **4(ಎ)** ಎಂದು ಗುರುತಿಸಲಾಯಿತು. ನಿ.ಪಿ–1 ರಿಂದ 4 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನೂ ವಶಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಮರು ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀಸವಾಲುಃ ಸ.ಸ.ಅ ರವರಿಂದಃ**

ದಿನಾಂಕ 18.10.2023 ರಂದು ನನ್ನ ಹೆಂಡತಿ ಕೂಲಿ ಕೆಲಸಕ್ಕೆ ಹೋಗಿದ್ದು, ಮಧ್ಯಾಹ್ನ 2.30 ಗಂಟೆ ಸಮಯದಲ್ಲಿ ನಾನು ಅಂಗಡಿ ಬೀದಿಯಲ್ಲಿರುವಾಗ ನನ್ನ ಹೆಂಡತಿಗೆ ಅಪಘಾತವಾಗಿರುತ್ತದೆಂದು ಯಾರೋ ಬಂದು ನನಗೆ ತಿಳಿಸಿರುತ್ತಾರೆ ಎಂದರೆ ಸರಿ. ನಾನು ಸ್ಥಳಕ್ಕೆ ಹೋಗಿ ನೋಡಿದಾಗ ನನ್ನ ಹೆಂಡತಿ ಅಪಘಾತಕ್ಕೊಳಪಟ್ಟು ಕೆಳಗೆ ಬಿದ್ದಿದ್ದು, ಇದರಿಂದ ಅವರ ತಲೆಗೆ ಮತ್ತು ದೇಹದ ಇತರೆ ಭಾಗಗಳಿಗೆ ಪೆಟ್ಟಾಗಿದ್ದು, ಆಸ್ಪತ್ರೆಗೆ ದಾಖಲಿಸಿದ್ದು, ನಂತರ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ ಎಂದರೆ ಸರಿ. ಅಪಘಾತವು ಆರೋಪಿಯ ತಪ್ಪಿನಿಂದ ಆಗಿರುತ್ತದೆ ಎಂದರೆ ನಾನು ನೋಡಿಲ್ಲ. ನಾನು ಈ ವಿಚಾರವಾಗಿ ನಿ.ಪಿ–1 ಮತ್ತು 2 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ನಾನು ದೂರು ಕೊಟ್ಟ ಮೇರೆಗೆ ದಿನಾಂಕ 20.04.2023 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದು ನಾನು ತೋರಿಸಿಕೊಟ್ಟಂತೆ ನಿ.ಪಿ–3 ರಂತೆ ಸ್ಥಳ ಮಹಜರ್ ಮಾಡಿರುತ್ತಾರೆಂದರೆ ಸರಿಯಲ್ಲ. ಅದೇ ದಿವಸ ಮ್ಯಾಕ್ಸಿ ಕ್ಯಾಬನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈಗ ನನಗೆ ಓದಿ ಹೇಳಿದಂತೆ ಪೊಲೀಸರಿಗೆ ಮರು ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಸದರಿ ಮರು ಹೇಳಿಕೆಯನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಹಿಯಿಂದ ಗುರುತಿಸಲಾದ ಸದರಿ ಮರು ಹೇಳಿಕೆಯ ಭಾಗವನ್ನು **ನಿ.ಪಿ–5** ಎಂದು ಗುರುತಿಸಲಾಯಿತು. ಅಪಘಾತವು ಆರೋಪಿಯ ತಪ್ಪಿನಿಂದ ಆಗಿದ್ದರೂ ಕೂಡ ಅವರಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದಃ ಏನೂ ಇರುವುದಿಲ್ಲ.

**ಮರುವಿಚಾರಣೆ:** ಇರುವುದಿಲ್ಲ.

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

ಸಹಿ/–

**ಪ್ರಧಾನ ದಿವಾನಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**

**ನಂಜನಗೂಡು.**